ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	159(149)
ಸದಸ್ಯರ ಹೆಸರು	ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	03.03.2020
ಉತ್ತರಿಸುವವರು	ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಅಕ್ರಮ ಹಾಗೂ ಅನಧಿಕೃತ ಕಟ್ಟಡಗಳ ನಿರ್ಮಾಣ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಟ್ಟಡಗಳ ನಿರ್ಮಾಣವಾಗಿರುವುದು ಕಂಡು ಬಂದಿರುತ್ತದೆ.
(ಆ)	ಬಂದಿದ್ದಲ್ಲಿ, ಅಕ್ರಮ ಹಾಗೂ ಅನಧಿಕೃತ ಕಟ್ಟಡಗಳ ನಿರ್ಮಾಣದ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)	ನಗರ ಸ್ಥಳೀಯ ಸಂಸ್ಥೆಯ ಜಾಗದಲ್ಲಿ ಅಕ್ರಮವಾಗಿ ನಿರ್ಮಾಣ ಮಾಡಿರುವಂತಹ ಕಟ್ಟಡಗಳನ್ನು ತೆರವುಗೊಳಿಸಿ ನಗರ ಸ್ಥಳೀಯ ಸಂಸ್ಥೆಯ ವಶಕ್ಕೆ ಪಡೆಯಲು ಕ್ರಮವಹಿಸಲಾಗುತ್ತಿದೆ. ನಗರ ಸ್ಥಳೀಯ ಸಂಸ್ಥೆಯಿಂದ ಪರವಾನಿಗೆಯನ್ನು ಪಡೆಯದೇ ನಿರ್ಮಿಸುವ ಅನಧಿಕೃತ ಕಟ್ಟಡಗಳಿಗೆ ಕರ್ನಾಟಕ ಮಹಾನಗರ ಪಾಲಿಕೆ ಅಧಿನಿಯಮ 1976ರ ಕಲಂ 321 ಹಾಗೂ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಕಲಂ 187ರ ರೀತ್ಯಾ ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ. ಈಗಾಗಲೇ ಅನಧಿಕೃವಾಗಿ ನಿರ್ಮಿಸಲಾಗಿರುವ ಕಟ್ಟಡಗಳಿಗೆ ಕರ್ನಾಟಕ ಮಹಾನಗರ ಪಾಲಿಕೆ ಅಧಿನಿಯಮ 1976ರ ಕಲಂ 112(ಸಿ) ಹಾಗೂ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಕಲಂ 107ರ ರೀತ್ಯಾ ಸ್ವತ್ತು ತೆರಿಗೆಯ ಎರಡರಷ್ಟಕ್ಕೆ ಸಮನಾದ ದಂಡವನ್ನು ವಿಧಿಸಲಾಗುತ್ತಿದೆ.

ಸಂಖ್ಯೆ: ನಅಇ 12 ಜಿಇಎಲ್ 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು